ಎಲ್ಲಾ ರೀತಿಯ ಸವಲತ್ತುಗಳನ್ನು ಒದಗಿಸುವುದಲ್ಲದೆ ಉಳ್ಳಾಲಕ್ಕೆ ಒಂದು ಸಮುದಾಯ ಆರೋಗ್ಯ ಕೇಂದ್ರವನ್ನು ತೆಗೆಯಬೇಕೆಂದು ರಾಜ್ಯ ಸರ್ಕಾರವನ್ನು ಈ ಮೂಲಕ ಒತ್ತಾಯಿಸುತ್ತೇನೆ.

ಶ್ರೀ ಸಿದ್ದರಾಮಯ್ಯ (ಹಣಕಾಸು ಸಚಿವರು) : ಮಾನ್ಯ ಅಧ್ಯಕ್ಷರೆ, ತಮ್ಮ ಅನುಮತಿಯನ್ನು ಪಡೆದು ನಾನು ಈ ಹೇಳಿಕೆಯನ್ನು ಸಭೆಯಮುಂದೆ ನೀಡಬಯಸುತ್ತೇನೆ. ದಕ್ಷಿಣ ಕನ್ನಡ ಜಿಲ್ಲೆ ಉಳ್ಳಾಲ ನಗರದಲ್ಲಿ ಹಾಲಿ ಪ್ರಾಥಮಿಕ ಆರೋಗ್ಯ ಕೇಂದ್ರವು ಕಾರ್ಯ ನಿರ್ವಹಿಸುತ್ತಾ ಇದೆ. ಈ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು 30ಹಾಸಿಗೆಗಳ ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಮಂಗಳೂರು ತಾಲ್ಲೂಕಿನಲ್ಲಿ1991ನೇ ಜನಗಣತಿಯ ಪ್ರಕಾರ ಜನಸಂಖ್ಯೆ 2,30,592 ಇರುತ್ತದೆ. ಮಂಗಳೂರು ತಾಲ್ಲೂಕಿನಲ್ಲಿನ ಮುಲ್ಕಿ ಗ್ರಾಮದಲ್ಲಿ 44 ಹಾಸಿಗೆಗಳ ಸಮುದಾಯ ಆರೋಗ್ಯ ಕೇಂದ್ರವಿರುತ್ತದೆ. ಉಳ್ಳಾಲ ಗ್ರಾಮದ ಅತಿ ಸಮೀಪದ ಮಂಗಳೂರಿನಲ್ಲಿ ಸರ್ಕಾರದ 675 ಹಾಸಿಗೆಗಳುಳ್ಳ ವೆನಲಾಕ್ ಜಿಲ್ಲಾ ಆಸ್ಪತ್ರೆ ಹಾಗೂ 250 ಹಾಸಿಗೆಗಳುಳ್ಳ ಲೇಡಿ ಗೋಷನ್ ಆಸ್ಪತ್ರೆ ಕಾರ್ಯ ನಿರ್ವಹಿಸುತ್ತಿದ್ದು, ಆ ತಾಲ್ಲೂಕಿನ ಗ್ರಾಮಸ್ಥರಿಗೆ ಸಾಕಷ್ಟು ಆರೋಗ್ಯ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

ರಾಜ್ಯದಲ್ಲಿ ಸ್ವಾಯತ್ತ ಆಸ್ಪತ್ರೆಗಳು

ಶ್ರೀ ಎ.ಟಿ. ರಾಮಸ್ವಾಮಿ (ಅರಕಲಗೂಡು) : ರಾಜ್ಯದಲ್ಲಿ ಎಷ್ಟು ಸ್ವಾಯತ್ತ ಆಸ್ಪತ್ರೆಗಳಿರುತ್ತವೆ. ಅವುಗಳಿಗೆ ನಿರ್ದೇಶಕರುಗಳನ್ನು ನೇಮಕಮಾಡಲು ಇರುವ ಮಾನದಂಡಗಳೇನು ? ನಿರ್ದೇಶಕರುಗಳನ್ನು ನೇಮಕ ಮಾಡಲು ಯಾವ್ಯಾವ ಸ್ವಾಯತ್ತ ಆಸ್ಪತ್ರೆಗಳಿಗೆ ಇರುವ ವಯೋಮಿತಿ ಏನು ? ವಯೋಮಿತಿಯಲ್ಲಿ ವ್ಯತ್ಯಾಸವಿದ್ದರೆ ಏಕೆ ಎಂದು ಸರ್ಕಾರದಿಂದ ತಿಳಿಯಬಯಸುತ್ತೇನೆ.

ಶ್ರೀ ಎ.ಬಿ. ಪಾಟೀಲ್ (ವೈದ್ಯಕೀಯ ಶಿಕ್ಷಣ ಸಚಿವರು) : ರಾಜ್ಯದಲ್ಲಿ ಒಟ್ಟು 7 ಸ್ವಾಯತ್ತ ಆಸ್ಪತ್ರೆಗಳು ಇರುತ್ತವೆ.

1) ಇಂದಿರಾಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆ,

2) ಶ್ರೀ ಜಯದೇವ ಹೃದ್ರೋಗ ಚಿಕಿತ್ಸಾ ಸಂಸ್ಥೆ,

3) ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ, ಈ ಮೂರು ಸಂಸ್ಥೆಗಳ ನಿರ್ದೇಶಕರ ನೇಮಕಾತಿಯನ್ನು ಸದರಿ ಸಂಸ್ಥೆಗಳ ಆಡಳಿತ ಮಂಡಳಿಗಳು ನೇರ ನೇಮಕಾತಿಯಿಂದ ಅಥವಾ 5 ವರ್ಷಗಳ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲಾಗುವುದು. ಈ ನಿರ್ದೇಶಕರುಗಳ ಹುದ್ದೆಗೆ ಗರಿಷ್ಠ 50 ವರ್ಷಗಳ ವಯೋಮಿತಿ ಇದ್ದು, ವಿಶೇಷ ಸಂದರ್ಭದಲ್ಲಿ ಕಾರಣಗಳನ್ನು ಲಿಖಿತದಲ್ಲಿ ದಾಖಲಿಸಿ ರಿಯಾಯತಿ ನೀಡಬಹುದಾಗಿರುತ್ತದೆ.

4) ನಿಮ್ಹಾನ್ಸ್ ಸಂಸ್ಥೆಯು ಭಾರತ ಸರ್ಕಾರದ ವ್ಯಾಪ್ತಿಗೆ ಬರುತ್ತದೆ

5) ಸಂಜಯಗಾಂಧಿ ಅಘಘಾತ ಮತ್ತು ಸಂಶೋಧನಾ ಸಂಸ್ಥೆ, ಈ ಸಂಸ್ಥೆಯ ನಿರ್ದೇಶಕರ

ನೇಮಕಾತಿಯನ್ನು ಆಡಳಿತ ಮಂಡಳಿಯವರಿಂದ ನೇರ ನೇಮಕಾತಿ, ಗುತ್ತಿಗೆ ಆಧಾರ ಅಥವಾ ನಾಮನಿರ್ದೇಶನದ ಮೂಲಕ ಮಾಡಿಕೊಳ್ಳಲಾಗುತ್ತದೆ. ವಯೋಮಿತಿ 58 ವರ್ಷಗಳು. ಕೆಲವು ವಿಶಿಷ್ಟ ಸಂದರ್ಭಗಳಲ್ಲಿ ಈ ವಯೋಮಿತಿಯನ್ನು ಸಡಿಲಗೊಳಿಸಬಹುದು.

ವೈದ್ಯಕೀಯ ಶಿಕ್ಷಣ ಇಲಾಖೆಗೆ ಸಂಬಂಧಪಟ್ಟಂತೆ ಕರ್ನಾಟಕ ವೈದ್ಯಕೀಯ ಕಾಲೇಜು ಹುಬ್ಬಳ್ಳಿ, ಮತ್ತು ಸರ್ಕಾರಿ ವೈದ್ಯಕೀಯ ಕಾಲೇಜು ಬಳ್ಳಾರಿ ಇವುಗಳನ್ನು ಸ್ವಾಯತ್ತ ಸಂಸ್ಥೆಗಳನ್ನಾಗಿ ಪರಿವರ್ತಿಸಲಾಗಿದೆ. ಸದರಿ 2 ಸಂಸ್ಥೆಗಳಿಗೆ ನಿರ್ದೇಶಕರುಗಳನ್ನು ನೇಮಕ ಮಾಡಲು ವಯೋಮಿತಿಯನ್ನು 56 ವರ್ಷಗಳಿದ್ದು, ವಿಶೇಷ ಪ್ರಕರಣಗಳಲ್ಲಿ 57 ವರ್ಷಗಳವರೆಗೆ ಸಡಲಿಸಬಹುದು.

ಶಿಗ್ಗಾಂವ್ ಹಾಗೂ ಸವಣೂರು ತಾಲ್ಲೂಕುಗಳಲ್ಲಿ ಆಶ್ರಯ, ಅಂಬೇಡ್ಕರ್ ಹಾಗೂ ಇಂದಿರಾ ಅವಾಸ್ ಯೋಜನೆಯಡಿಯಲ್ಲಿ ಮನೆಗಳ ಹಂಚಿಕೆ.

ಶ್ರೀ ಮಂಜುನಾಥ್ ಸಿ. ಕುನ್ನೂರು (ಶಿಗ್ಗಾಂವ್) : ಶಿಗ್ಗಾಂವ್ ಹಾಗೂ ಸವಣೂರು ತಾಲ್ಲೂಕುಗಳಲ್ಲಿ ಆಶ್ರಯ, ಅಂಬೇಡ್ಕರ್ ಹಾಗೂ ಇಂದಿರಾ ಅವಾಸ್ ಯೋಜನೆಗಳಡಿಯಲ್ಲಿ ಮನೆಗಳನ್ನು ಹಂಚಿಕೆ ಮಾಡುವಲ್ಲಿ ಅರ್ಹ ಫಲಾನುಭವಿಗಳನ್ನು ಸರಿಯಾಗಿ ಗುರ್ತಿಸದಿರುವುದರಿಂದಾಗಿ ಮನೆಗಳು ನ್ಯಾಯವಾಗಿ ದೊರೆಯಬೇಕಾಗಿರುವವರಿಗೆ ದೊರೆಯದ ಸಾರ್ವಜನಿಕರಿಂದ ಅನೇಕ ದೂರುಗಳು ಬಂದಿವೆ. ಹಾಗೂ ಫಲಾನುಭವಿಗಳ ಆಯ್ಕೆಯನ್ನು ಶಿಗ್ಗಾಂವ್ ಸವಣೂರು ಹಾಗೂ ಧಾರವಾಡ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ನೇರವಾಗಿ ತಾಲ್ಲೂಕು ಪಂಚಾಯಿತಿಗೆ ಅಧಿಕಾರ ಕೊಟ್ಟಿದ್ದು ಗ್ರಾಮ ಸಭೆ ಹಾಗೂ ಗ್ರಾಮ ಪಂಚಾಯಿತಿ ಸದಸ್ಯರ ಅಭಿಪ್ರಾಯ ಪಡೆಯದೆ ಫಲಾನುಭವಿಗಳ ಆಯ್ಕೆ ಮಾಡಿದ್ದು, ಕಾನೂನು ಬಾಹಿರವಾಗಿರುತ್ತದೆ. ಈ ಬಗ್ಗೆ ಈಗಾಗಿರುವ ಅನ್ಯಾಯವನ್ನು ಸರಿಪಡಿಸುವುದಕ್ಕೆ ಸಂಬಂಧಿಸಿದಂತೆ ಸರ್ಕಾರ ಸದನಕ್ಕೆ ಹೇಳಿಕೆ ನೀಡಬೇಕೆಂದು ಒತ್ತಾಯಿಸುತ್ತೇನೆ.

ಶಾಸನ ರಚನಾ ಕಾರ್ಯಕಲಾಪಗಳು

(ಎ) ವಿಧೇಯಗಳ ಮಂಡನೆ

(1) ಬೆಂಗಳೂರು ಅರಮನೆ (ಅರ್ಜನೆ ಮತ್ತು ವರ್ಗಾವಣೆ) ವಿಧೇಯಕ, 1996

ಶ್ರೀ ಎಂ. ಪಿ. ಪ್ರಕಾಶ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು (ಮುಖ್ಯಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೇ, 1996 ನೇ ಸಾಲಿನ ಬೆಂಗಳೂರು ಅರಮನೆ (ಅರ್ಜನೆ ಮತ್ತು ವರ್ಗಾವಣೆ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"1996ನೇ ಸಾಲಿನ ಬೆಂಗಳೂರು ಅರಮನೆ (ಅರ್ಜನೆ ಮತ್ತು ವರ್ಗಾವಣೆ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"